RNU AIR DHARWAD

MAY 27, 2025

# AKASHAVANI - DHARWAD

# PRADESH SAMACHARA (KANNADA) 07.05 A.M.

<><><>

**ಮುಖ್ಯಾಂಶಗಳು:**

1) **ರಾಜ್ಯದಲ್ಲಿ ಕೋವಿಡ್** ವ್ಯಾಪಿಸದಂತೆ ಮುನ್ನೆಚ್ಚರಿಕೆ: ಮುಖ್ಯಮಂತ್ರಿಯವರಿಂದ ಮಹತ್ವದ ಸಭೆ.
2) **ಮಳೆ ಮುಂದುವರಿಕೆ:** ಹಲವು ಜಿಲ್ಲೆಗಳಲ್ಲಿ ವಿಪತ್ತು ನಿರ್ವಹಣಾ ಪ್ರಾಧಿಕಾರದಿಂದ, ಜನ ಜಾಗೃತಿಗೆ, ಸೂಚನೆ.
3) **ದೇಶದ ರಕ್ಷಣಾ ವಹಿವಾಟಿನಲ್ಲಿ** ಕರ್ನಾಟಕದ ಕೊಡುಗೆ ಶೇ. 65ರಷ್ಟು– ಸಚಿವ ಎಂ.ಬಿ. ಪಾಟೀಲ.
4) **ಕರ್ನಾಟಕ** ವಿದ್ಯಾವರ್ಧಕ ಸಂಘದ ಚುನಾವಣೆ: ಚಂದ್ರಕಾಂತ ಬೆಲ್ಲದ ಬಣಕ್ಕೆ ಜಯ.

**ಈಗ ವಾರ್ತೆಗಳ ವಿವರ**

<><><>

**ರಾಜ್ಯದಲ್ಲಿ ಕೊವಿಡ್ ಬಾಧಿತರ ಸಂಖ್ಯೆಯಲ್ಲಿ** ಏರಿಕೆ ಕಂಡು ಬಂದ ಹಿನ್ನೆಲೆಯಲ್ಲಿ, ಸೋಂಕು ವ್ಯಾಪಿಸದಂತೆ ಎಚ್ಚರಿಕೆ ವಹಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ನಿರ್ದೇಶಿಸಿದ್ದಾರೆ. ಬೆಂಗಳೂರಿನಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವೈದ್ಯಕೀಯ ಶಿಕ್ಷಣ ಖಾತೆ ಸಚಿವರು ಹಾಗೂ ಇಲಾಖೆಯ ವಿವಿಧ ಅಧಿಕಾರಿಗಳೊಂದಿಗೆ ವಿಶೇಷ ಸಭೆ ನಡೆಸಿದರು. ರಾಜ್ಯದ ಎಲ್ಲ ಆಸ್ಪತ್ರೆಗಳಲ್ಲಿ ಅಗತ್ಯವಾಗಿ ಪರೀಕ್ಷಾ ಕೇಂದ್ರಗಳನ್ನು ಆರಂಭಿಸಬೇಕು, ಬಾಣಂತಿ ಹಾಗೂ ಮಕ್ಕಳ ಆರೋಗ್ಯದ ಬಗ್ಗೆ ವಿಶೇಷ ಕಾಳಜಿ ವಹಿಸಬೇಕು ಎಂದು ಮುಖ್ಯಮಂತ್ರಿ ಅವರು ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು. ಸಭೆಯ ಬಳಿಕ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ಸಚಿವ, ದಿನೇಶ ಗುಂಡೂರಾವ್ ಶಾಲಾ ಮಕ್ಕಳಲ್ಲಿ ನೆಗಡಿ, ಜ್ವರ ಬಾಧೆ ಕಾಣಿಸಿಕೊಂಡಲ್ಲಿ ಅವರನ್ನು ಶಾಲೆಗೆ ಕಳುಹಿಸದೆ, ಪೋಷಕರು ಆರೋಗ್ಯ ಕಾಳಜಿ ವಹಿಸಬೇಕು ಎಂದರು.

<><><>

**ದೇಶದಲ್ಲಿ ಹೆಚ್ಚುತ್ತಿರುವ** ಕೊವಿಡ್ ಪ್ರಕರಣಗಳ ಕುರಿತು ಪ್ರತಿಕ್ರಿಯೆ ನೀಡಿರುವ ಭಾರತೀಯ ವೈದ್ಯಕೀಯ ಸಂಶೋಧನಾ ಮಂಡಳಿ, ಮಹಾ ನಿರ್ದೇಶಕ ಡಾಕ್ಟರ್ ರಾಜೀವ್ ಬಹ್ಲ್ 'ಪ್ರಸ್ತುತ ಸೋಂಕಿನ ತೀವ್ರತೆ ಸೌಮ್ಯವಾಗಿದ್ದು, ಆತಂಕಕ್ಕೆ ಕಾರಣವಿಲ್ಲ, ಅತ್ಯಂತ ನಿಕಟವಾಗಿ ಕೊವಿಡ್ ಹೊಸ ರೂಪಾಂತರಗಳ ಬಗ್ಗೆ ಪರಿಶೀಲಿಸಲಾಗುತ್ತಿದ್ದು, ಸಾರ್ವಜನಿಕರು ಜಾರೂಕರಾಗಿರಬೇಕು ಎಂದಿದ್ದಾರೆ.

<><><>

**ರಾಜ್ಯದ ಕೆಳ ಹಂತದ ವಿವಿಧ ನ್ಯಾಯಾಲಯಗಳಲ್ಲಿ 10 ಲಕ್ಷಕ್ಕೂ ಅಧಿಕ** ಪ್ರಕರಣಗಳು ಇತ್ಯರ್ಥಕ್ಕಾಗಿ ಬಾಕಿ ಉಳಿದಿವೆ. ಈ ಹಿನ್ನೆಲೆಯಲ್ಲಿ ಅವುಗಳ ತ್ವರಿತ ವಿಲೇವಾರಿಗೆ ಅನುವಾಗುವಂತೆ ಸಿವಿಲ್ ಪ್ರಕ್ರಿಯೆ ಸಂಹಿತೆಗೆ, ತಿದ್ದುಪಡಿ ತರಲಾಗಿದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಖಾತೆ ಸಚಿವ ಎಚ್.ಕೆ. ಪಾಟೀಲ್ ಹೇಳಿದರು. ಬೆಂಗಳೂರಿನಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಕೆಳ ಹಂತದ ನ್ಯಾಯಾಲಯಗಳಲ್ಲಿ ಸುಮಾರು 20 ವ ರ್ಗಳಿಂದ ಇತ್ಯರ್ಥವಾಗದೆ ಬಾಕಿ ಉಳಿದ ಪ್ರಕರಣಗಳನ್ನು, ತ್ವರಿತ ವಿಲೇವಾರಿ ಮಾಡುವ ನಿಟ್ಟಿನಲ್ಲಿ ಸಿವಿಲ್ ಪ್ರಕ್ರಿಯೆ ಸಂಹಿತೆ ತಿದ್ದುಪಡಿ ಮಹತ್ವದ್ದಾಗಿದೆ. ಉಭಯ ಸದನಗಳಲ್ಲಿ ಅಂಗೀಕಾರ ದೊರೆತಿದ್ದು, ರಾಜ್ಯಪಾಲರು ರಾ ್ಟ್ರಪತಿಗಳಿಗೆ ಕಳುಹಿಸಿದ್ದು, ಇದೀಗ ಅಂಕಿತ ದೊರೆತಿದೆ ಎಂದರು.

<><><>

**ದೇಶದ ಏರೋಸ್ಪೇಸ್ ಹಾಗೂ** ಡಿಫೆನ್ಸ್ ಕಾರಿಡಾರ್ ಕ್ಷೇತ್ರದಲ್ಲಿ ರಾಜ್ಯದ ಕೊಡುಗೆ ಶೇಕಡ 65 ರಷ್ಟಿದ್ದು, ವಿಶ್ವದಲ್ಲೇ ಕರ್ನಾಟಕವು ಮೂರನೇ ಸ್ಥಾನದಲ್ಲಿದೆ ಎಂದು ರಾಜ್ಯ ಕೈಗಾರಿಕೆ ಹಾಗೂ ಮೂಲಸೌಕರ್ಯ ಖಾತೆ ಸಚಿವ ಎಂ.ಬಿ ಪಾಟೀಲ್ ಹೇಳಿದರು. ರಾಜ್ಯದ, ಎಚ್.ಎ.ಎಲ್ ಘಟಕವನ್ನು ಆಂಧ್ರಪ್ರದೇಶಕ್ಕೆ ಸ್ಥಳಾಂತರ ಮಾಡಲಾಗುತ್ತಿದೆ ಎಂಬ ಬಗ್ಗೆ ವರದಿಯಾಗಿರುವ ಹಿನ್ನೆಲೆ, ತಮ್ಮ ಎಕ್ಸ್ ಖಾತೆ ಮೂಲಕ ಪ್ರತಿಕ್ರಿಯಿಸಿರುವ ಅವರು, ರಾಜ್ಯದ ಕೈಗಾರಿಕಾ ಘಟಕವನ್ನು ಸ್ಥಳಾಂತರಿಸುವ ಉದ್ದೇಶ ಸಮಂಜಸವಲ್ಲ. ಡಿಫೆನ್ಸ್ ಕಾರಿಡಾರನ್ನು ಉತ್ತರಪ್ರದೇಶ ಹಾಗೂ ತಮಿಳುನಾಡಿಗೆ ಸ್ಥಳಾಂತರಿಸಲಾಗಿದ್ದು, ಈ ಬಗ್ಗೆ ಕೇಂದ್ರ ರಕ್ಷಣಾ ಖಾತೆ ಸಚಿವ ರಾಜನಾಥ್ ಸಿಂಗ್ ಅವರ ಜೊತೆ ಚರ್ಚಿಸುವುದಾಗಿ ತಿಳಿಸಿದರು.

<><><>

**ಕನ್ನಡದ ಪ್ರಾತಿನಿಧಿಕ ಸಂಸ್ಥೆ,** ಧಾರವಾಡ ಕರ್ನಾಟಕ ವಿದ್ಯಾವರ್ಧಕ ಸಂಘದ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಚಂದ್ರಕಾಂತ ಬೆಲ್ಲದ ಪುನರಾಯ್ಕೆಯಾಗಿದ್ದಾರೆ. ಉಪಾಧ್ಯಕ್ಷರಾಗಿ ಸಂಜೀವ ಕುಲಕರ್ಣಿ ಹಾಗೂ ಪ್ರಧಾನ ಕಾರ್ಯದರ್ಶಿಯಾಗಿ ಶಂಕರ ಹಲಗತ್ತಿ ಆಯ್ಕೆಯಾಗಿದ್ದಾರೆ. ಜೂನ್. 1 ರಂದು ನಡೆಯಲಿರುವ ಸಂಘದ ಸಾಮಾನ್ಯ ಸಭೆಯಲ್ಲಿ, ಚುನಾವಣಾ ಫಲಿತಾಂಶವನ್ನು ಅಧಿಕೃತವಾಗಿ ಘೋಷಿಸಲಾಗುವುದು ಎಂದು ಚುನಾವಣಾಧಿಕಾರಿ ಸಿ.ಎಸ್ ನೇಗಿನಾಳ ತಿಳಿಸಿದ್ದಾರೆ.

<><><>

**ರಾಜ್ಯದ ಕರಾವಳಿ,** ಮಲೆನಾಡು ಪ್ರದೇಶಗಳಲ್ಲಿ ನಿರಂತರವಾಗಿ ಸುರಿಯುತ್ತಿರುವ ಮಳೆಯಿಂದಾಗಿ ನದಿಗಳು ಉಕ್ಕಿ ಹರಿಯುತ್ತಿವೆ. ಉತ್ತರ ಕನ್ನಡ ಜಿಲ್ಲೆಯಲ್ಲಿ, ರೆಡ್ ಅಲರ್ಟ್ ಘೋಷಿಸಲಾಗಿದ್ದು, ಮೀನುಗಾರರು ಸಮುದ್ರಕ್ಕೆ ತೆರಳದಂತೆ ಹಾಗೂ ತಗ್ಗು ಪ್ರದೇಶದಲ್ಲಿರುವ ಜನರು ಸುರಕ್ಷಿತ ಸ್ಥಳಕ್ಕೆ ತೆರಳುವಂತೆ ಜಿಲ್ಲಾಡಳಿತ ಸೂಚಿಸಿದೆ.

<><><>

**ಕೊಡಗು ಜಿಲ್ಲೆಯಲ್ಲಿ** ಕಳೆದ ನಾಲ್ಕು ದಿನಗಳಿಂದ ಸುರಿಯುತ್ತಿರುವ ಮಳೆಗೆ ಜಲಪಾತ, ನದಿ, ತೊರೆಗಳು ಉಕ್ಕಿ ಹರಿಯುತ್ತಿವೆ. ಮುಂಜಾಗ್ರತಾ ಕ್ರಮವಾಗಿ ಪ್ರವಾಸಿಗರು ಹಾಗೂ ಸಾರ್ವಜನಿಕರು ನೀರಿಗೆ ಇಳಿಯಬಾರದು ಹಾಗೂ ಯಾವುದೇ ಸಾಹಸ ಚಟುವಟಿಕೆ ನಡೆಸಬಾರದು ಎಂದು ಜಿಲ್ಲಾಧಿಕಾರಿ ಕೆ. ವೆಂಕಟರಾಜಾ ಆದೇಶಿಸಿದ್ದಾರೆ.

<><><>

**ಬೆಳಗಾವಿ ಜಿಲ್ಲೆ,** ಗೋಕಾಕ ಮಹಾಲಿಂಗೇಶ್ವರ ನಗರದಲ್ಲಿ ನಿರಂತರ ಮಳೆಯ ಪರಿಣಾಮ, ಮನೆ ಗೋಡೆ ಕುಸಿದು ಮೂರು ವರ್ಷದ ಮಗು, ಕೀರ್ತಿಕಾ ನಾಗೇಶ ಪೂಜಾರಿ ಮೃತಪಟ್ಟಿದ್ದಾರೆ. ತಾಯಿ ಹಾಗೂ ಸಹೋದರಿಯರಿಗೆ ಗಾಯಗಳಾಗಿದ್ದು ತಾಲೂಕು ಆಸ್ಪತ್ರೆಗೆ ದಾಖಲಿಸಲಾಗಿದೆ.  ಗೋಕಾಕ ನಗರದಲ್ಲಿ ಪಾದಚಾರಿಯೋರ್ವರು ರಭಸದಿಂದ ಹರಿಯುತ್ತಿರುವ ಚರಂಡಿಯಲ್ಲಿ ಸಿಲುಕಿ, ಮೃತಪಟ್ಟ ಘಟನೆ ನಡೆದಿದೆ.

<><><>

**ಚಿಕ್ಕಮಗಳೂರು ಜಿಲ್ಲೆಯ** ವಿವಿಧೆಡೆಗಳಲ್ಲಿ ಸತತವಾಗಿ ಸುರಿದ ಮಳೆಗೆ ಒಟ್ಟು 23 ಮನೆಗಳಿಗೆ ಹಾನಿಯಾಗಿದೆ, ಐದು ಮನೆಗಳು ಸಂಪೂರ್ಣವಾಗಿ ಕುಸಿದಿವೆ. ಚಿಕ್ಕಮಗಳೂರು ಸೇರಿದಂತೆ ಕಳಸ, ಮೂಡಿಗೆರೆ, ಶೃಂಗೇರಿ, ಕೊಪ್ಪ ಹಾಗೂ ಎನ್.ಆರ್ ಪುರ ತಾಲೂಕುಗಳ, ಅಂಗನವಾಡಿಗಳಿಗೆ 28 ರ ವರೆಗೆ ಜಿಲ್ಲಾಧಿಕಾರಿ ರಜೆ ಘೋಷಿಸಿದ್ದಾರೆ. ಮಲೆನಾಡು ಭಾಗದ ಹಲವೆಡೆ ಕಾಫಿ ತೋಟದ ಕಾರ್ಮಿಕರಿಗೆ ರಜೆ ಘೋಷಿಸಲಾಗಿದೆ.

<><><>

**ಉಡುಪಿಯಲ್ಲಿ** ನಿರಂತರ ಮಳೆ ಹಿನ್ನೆಲೆ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳುವಂತೆ ಜಿಲ್ಲಾ ಉಸ್ತುವಾರಿ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ ಜಿಲ್ಲಾಡಳಿತಕ್ಕೆ ಸೂಚಿಸಿದ್ದಾರೆ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸತತವಾಗಿ ಮಳೆಯಾಗುತ್ತಿರುವ ಹಿನ್ನೆಲೆ ವಿಪತ್ತು ನಿರ್ವಹಣಾ ಪ್ರಾಧಿಕಾರ ನಿಯಂತ್ರಣ ಕೊಠಡಿ ಹಾಗೂ ಸಹಾಯವಾಣಿ ಆರಂಭಿಸಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವರಾದ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.

<><><>

**ಬೆಳಗಾವಿ ಜಿಲ್ಲೆ ಬೈಲಹೊಂಗಲ** ತಾಲೂಕಿನ ಶಿಲ್ಪಾ ಹೊಸಮನಿ ಅವರು, ಬಿಹಾರದ ಪಾಟಲೀಪುತ್ರದಲ್ಲಿ ಜರುಗಿದ ಖೇಲೋ ಇಂಡಿಯಾ ಯೂತ್ ಗೇಮ್ಸ್ ನ, 800 ಮೀಟರ್ ಓಟ ಸ್ಪರ್ಧೆಯಲ್ಲಿ ತೃತೀಯ ಸ್ಥಾನದೊಂದಿಗೆ ಕಂಚಿನ ಪದಕ ಜಯಿಸಿದ್ದಾರೆ. ಧಾರವಾಡದ ಜೆ.ಎಸ್.ಎಸ್ ಕಾಲೇಜು, ವಿದ್ಯಾರ್ಥಿನಿಯಾಗಿರುವ ಶಿಲ್ಪಾ ಹೊಸಮನಿ ಅವರು ಪ್ರದೇಶ ಸಮಾಚಾರದೊಂದಿಗೆ ತಮ್ಮ ಸಂತಸ ಹಂಚಿಕೊಂಡಿದ್ದಾರೆ.....

<><><>

**ಧ್ವನಿ: ಶಿಲ್ಪಾ ಹೊಸಮನಿ 34 ಸೆಕೆಂದುಗಳು**

<><><>

**ಭಾರತವು ವಿಶ್ವದ** ನಾಲ್ಕನೇ ಅತಿ ದೊಡ್ಡ ಆರ್ಥಿಕತೆಯಾಗಿದ್ದು, ಕೃಷಿ ಆಧಾರಿತ ನವೋದ್ಯಮಗಳ ಮೂಲಕ, ಕೃಷಿ ಕ್ಷೇತ್ರ ದೇಶದ ಆರ್ಥಿಕತೆಗೆ ಗಣನೀಯ ಕೊಡುಗೆ ನೀಡುತ್ತಿದೆ ಎಂದು ರಾಜ್ಯಪಾಲ ಥಾವರ ಚಂದ್ ಗೆಹ್ಲೋಟ್ ನುಡಿದರು. ರಾಯಚೂರು ಕೃಷಿ ವಿಶ್ವವಿದ್ಯಾಲಯದ 14 ನೇ ಘಟಿಕೋತ್ಸವದಲ್ಲಿ ವರ್ಚುವಲ್ ವೇದಿಕೆ ಮೂಲಕ ಪಾಲ್ಗೊಂಡು ಅವರು ಮಾತನಾಡಿದರು. ಸ್ಮಾರ್ಟ್ ಅಗ್ರಿಕಲ್ಚರ ಎಂಬ ಪರಿಕಲ್ಪನೆಯು ರೂಪು ಪಡೆಯುತ್ತಿದ್ದು, ಇದರಲ್ಲಿ ಯುವ ಕೃಷಿ ಪದವಿಧರರು ತೊಡಗುವಂತೆ ಕರೆ ನೀಡಿದರು.

<><><>

**ಆಪರೇಶನ್ ಸಿಂಧೂರ** ಯಶಸ್ವಿ ಸೈನಿಕ ಕಾರ್ಯಾಚರಣೆ ಹಿನ್ನೆಲೆ, ದೇಶದ ಸೈನಿಕ ಶಕ್ತಿಯ ಪರಾಕ್ರಮವನ್ನು ಸ್ಮರಿಸಿ, ಧಾರವಾಡದಲ್ಲಿ ತಿರಂಗಾ ಯಾತ್ರೆ ಆಯೋಜಿಸಲಾಯಿತು.

<><><>

**ಸಂಕ್ಷಿಪ್ತ ಸುದ್ದಿಗಳು:**

**ಹುಬ್ಬಳ್ಳಿ ತಾಲೂಕು** ಶಿರಗುಪ್ಪಿ ರೈತ ಸಂಪರ್ಕ ಕೇಂದ್ರದಲ್ಲಿ, ಕಾರ್ಮಿಕ ಖಾತೆ ಸಚಿವ ಸಂತೋಷ್ ಲಾಡ ಅವರು ಬಿತ್ತನೆ ಬೀಜಗಳ ವಿತರಣೆಗೆ ಚಾಲನೆ ನೀಡಿದರು.

**ಬಳ್ಳಾರಿ ಜಿಲ್ಲೆ, ಸಂಡೂರು ತಾಲೂಕಿನ ಜೈಸಿಂಗ್ ಪುರ ಬಳಿ** ಸಂಭವಿಸಿದ ರಸ್ತೆ ಅಪಘಾತದಲ್ಲಿ ಇಬ್ಬರು ಮಕ್ಕಳು ಸೇರಿದಂತೆ ನಾಲ್ವರು ಮೃತಪಟ್ಟ ಘಟನೆ ನಡೆದಿದೆ.

**ಶಿವಮೊಗ್ಗ ಜಿಲ್ಲೆಯ** ಎಲ್ಲ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಹಾವು ಹಾಗೂ ನಾಯಿ ಕಡಿತಕ್ಕೆ ಒಳಗಾದವರಿಗೆ ಅಗತ್ಯ ಔಷಧಗಳನ್ನು ದಾಸ್ತಾನು ಇರಿಸುವಂತೆ ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಸೂಚಿಸಿದ್ದಾರೆ.

**ವಿಧಾನಸಭಾ ಅಧ್ಯಕ್ಷ ಯು.ಟಿ ಖಾದರ್** ಅವರು ಪವಿತ್ರ ಹಜ್ ಯಾತ್ರೆ ಕೈಗೊಂಡಿದ್ದು, ಅಭಿವೃದ್ಧಿಯುತ ಕರ್ನಾಟಕ ಹಾಗೂ ಬಲಿಷ್ಠ ಭಾರತ ನಿರ್ಮಾಣಗೊಂಡು, ವಿಶ್ವ ಶಾಂತಿಗಾಗಿ ಪ್ರಾರ್ಥಿಸುವುದಾಗಿ ತಿಳಿಸಿದ್ದಾರೆ.

**ಚಿಕ್ಕಮಗಳೂರು ಜಿಲ್ಲೆ,** ವಿವಿಧೆಡೆಗಳಲ್ಲಿ ಡೆಂಗ್ಯೂ ಸಾಂಕ್ರಾಮಿಕ ಪ್ರಕರಣಗಳು ವರದಿಯಾದ ಹಿನ್ನೆಲೆಯಲ್ಲಿ, ತಾಲೂಕು ಆರೋಗ್ಯಾಧಿಕಾರಿ ಡಾಕ್ಟರ್ ಎಸ್. ಸೀಮಾ ನಗರದ ಹಲವು ಪ್ರದೇಶಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

<><><>

**ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು:**

1) **ರಾಜ್ಯದಲ್ಲಿ ಕೋವಿಡ್** ವ್ಯಾಪಿಸದಂತೆ ಮುನ್ನೆಚ್ಚರಿಕೆ: ಮುಖ್ಯಮಂತ್ರಿಯವರಿಂದ ಮಹತ್ವದ ಸಭೆ.
2) **ಮಳೆ ಮುಂದುವರಿಕೆ:** ಹಲವು ಜಿಲ್ಲೆಗಳಲ್ಲಿ ವಿಪತ್ತು ನಿರ್ವಹಣಾ ಪ್ರಾಧಿಕಾರದಿಂದ, ಜನ ಜಾಗೃತಿಗೆ, ಸೂಚನೆ.
3) **ದೇಶದ ರಕ್ಷಣಾ ವಹಿವಾಟಿನಲ್ಲಿ** ಕರ್ನಾಟಕದ ಕೊಡುಗೆ ಶೇ. 65ರಷ್ಟು– ಸಚಿವ ಎಂ.ಬಿ. ಪಾಟೀಲ.
4) **ಕರ್ನಾಟಕ** ವಿದ್ಯಾವರ್ಧಕ ಸಂಘದ ಚುನಾವಣೆ: ಚಂದ್ರಕಾಂತ ಬೆಲ್ಲದ ಬಣಕ್ಕೆ ಜಯ.

<><><>